ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 18–09–2021

# ಮಾಧ್ಯಮ ಆಹ್ವಾನ
# Media Invitation

1. ನೂತನ ಲಿಡ್‌ಕರ್ ಮಾರಾಟ ಮಳಿಗೆ ಪ್ರಾರಂಭ

ಚಾಲನೆ:
ಕೋಟ ಶ್ರೀನಿವಾಸ ಪೂಜಾರಿ,
ಮಾನ್ಯ ಸಮಾಜ ಕಲ್ಯಾಣ ಸಚಿವರು ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು, ಕರ್ನಾಟಕ ಸರ್ಕಾರ

ಪ್ರೊ ಎನ್. ಲಿಂಗಣ್ಣ
ಮಾಯಕೊಂಡ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಲಿಡ್‌ಕರ್ ಅಧ್ಯಕ್ಷರು.

ದಿನಾಂಕ: 20–09–2021, ಸೋಮವಾರ, ಸಮಯ: ಬೆಳಿಗ್ಗೆ 09.00 ಗಂಟೆಗೆ

ಸ್ಥಳ: ಡಾ.ಬಾಬು ಜಗಜೀವನ ರಾಂ ಲಿಡ್‌ಕರ್ ಭವನ, 2ನೇ ಮಹಡಿ, ಮಿಲ್ಲರ್ಸ್ ಟ್ಯಾಂಕ್ ಬಂಡ್ ಏರಿಯಾ, ವಸಂತನಗರ, ಬೆಂಗಳೂರು.

2. ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ 55ನೇ ಘಟಿಕೋತ್ಸವ ಕುರಿತು ಪತ್ರಿಕಾಗೋಷ್ಠಿ:

ಅಧ್ಯಕ್ಷತೆ:
ಡಾ. ಎಸ್. ರಾಜೇಂದ್ರ ಪ್ರಸಾದ್
ಕುಲಪತಿಗಳು, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ

ದಿನಾಂಕ: 20–09–2021, ಸೋಮವಾರ, ಸಮಯ: ಬೆಳಿಗ್ಗೆ 01.00 ಗಂಟೆಗೆ

ಸ್ಥಳ: ಆಡಳಿತ ಮಂಡಳಿ ಸಭಾ ಕೊಠಡಿ, ನಾಯಕ್‌ಭವನ, ಜಿಕೆವಿಕೆ, ಬೆಂಗಳೂರು.

ವಿಶೇಷ ಸೂಚನೆ: ಪತ್ರಿಕಾ ಗೋಷ್ಠಿಗೆ ವಾಹನದ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ದಿನಾಂಕ: 20–09–2021ರ ಮಧ್ಯಾಹ್ನ 12.00 ಗಂಟೆಗೆ ಪ್ರೆಸ್‌ಕ್ಲಬ್ ಆವರಣ, ಕಬ್ಬನ್ ಪಾರ್ಕ್ ಇಲ್ಲಿಂದ ಹೊರಡುವುದು.

ಹೆಚ್ಚಿನ ಮಾಹಿತಿಗಾಗಿ : ಡಾ. ಕೆ. ಶಿವರಾಮು, ಮೊಬೈಲ್ ಸಂಖ್ಯೆ. 9972035456 / 8277810930 ಮತ್ತು ಡಾ. ಎಂ.ಎ. ಮೂರ್ತಿ ಸಹಾಯಕ ಪ್ರಾಧ್ಯಾಪಕರು, ಮೊಬೈಲ್ ಸಂ. 9535355329 ಇವರನ್ನು ಸಂಪರ್ಕಿಸುವುದು.

# ಪತ್ರಿಕಾ ಪ್ರಕಟಣೆ

**PRESS RELEASE**

## ಅತ್ಯಂತ ಸರಳ ಸಜ್ಜನಿಕೆಯ ನ್ಯಾಯಾಧೀಶರು: ಮೋಹನ್ ಎಂ. ಶಾಂತನಗೌಡರ್

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಭಾರತದ ಸರ್ವೋಚ್ಚ ನ್ಯಾಯಾಲಯದ ತೀರ್ಪುಗಳನ್ನು ಧಾವೆ ಊಡಿದವರ ಮಾತೃ ಭಾಷೆಯಲ್ಲಿ ಹಾಗೂ ಸ್ಥಳೀಯ ಭಾಷೆಗಳಲ್ಲಿ ನೀಡುವುದು ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶರಾಗಿದ್ದ ದಿವಂಗತ ಮೋಹನ್ ಎಂ. ಶಾಂತನಗೌಡರ್ ಅವರ ಅಭಿಲಾಷೆಯಾಗಿತ್ತು ಎಂದು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಾಧೀಶರಾದ ಎನ್.ವಿ. ರಮಣ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ವಕೀಲರ ಪರಿಷತ್ತು ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ನ್ಯಾಯಮೂರ್ತಿ ದಿವಂಗತ ಮೋಹನ್ ಎಂ. ಶಾಂತನಗೌಡರ್ ಅವರ ನುಡಿ ನಮನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಮೋಹನ್ ಎಂ. ಶಾಂತನಗೌಡರ್ ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದು, ಯಾವಾಗಲೂ ಸಾಮಾನ್ಯ ವ್ಯಕ್ತಿಗಳ ಪರ ಚಿಂತನೆಯುಳ್ಳ ಅತ್ಯುತ್ತಮ ನ್ಯಾಯಾಧೀಶರಾಗಿದ್ದರು ಎಂದು ಹೇಳಿದರು.

ಉತ್ತರ ಕರ್ನಾಟಕದ ಹಳ್ಳಿಯೊಂದರಿಂದ ಬೆಳೆದು ಬಂದ ಗೌಡರು ಸ್ಥಳೀಯ ನ್ಯಾಯಾಲಯಗಳಿಂದ ಹಿಡಿದು ದೇಶದ ಅತ್ಯುನ್ನತ ನ್ಯಾಯಾಲಯದವರೆಗೂ ಮಾನವ ಸಂಬಂಧಗಳನ್ನು ಉಳಿಸಿಕೊಂಡಿದ್ದರು ಹಾಗೂ ಪ್ರತಿ ಕ್ಷಣವೂ ನ್ಯಾಯಾಲಯದ ವ್ಯವಸ್ಥೆಯನ್ನು ಮತ್ತಷ್ಟು ಸರಳೀಕರಿಸುವ ಮತ್ತು ಜನಸಾಮಾನ್ಯರ ಸ್ನೇಹಮಯಿ ನ್ಯಾಯಾಲಯಗಳನ್ನು ರೂಪಿಸುವ ಚಿಂತನೆಯಲ್ಲಿ ತೊಡಗಿದ್ದವರು.

ಗೌಡರ ಸರಳ ವ್ಯಕ್ತಿತ್ವವನ್ನು ಖ್ಯಾತ ಕವಿ ಡಿ.ವಿ.ಗುಂಡಪ್ಪನವರ 'ಹುಲ್ಲಾಗು ಬೆಟ್ಟದಡಿ' ಕಗ್ಗವನ್ನು ಹೇಳಿದ ಅವರು, ಕಳೆದ ಒಂದೂವರೆ ವರ್ಷಗಳ ಕಾಲ ಸುಪ್ರೀಂಕೋರ್ಟ್‌ನಲ್ಲಿ ಅವರೊಂದಿಗಿನ ಒಡನಾಟವನ್ನು ನೆನಪಿಸಿಕೊಂಡು ಸ್ವಲ್ಪ ಭಾವುಕರಾದರು. ಅವರ ಮತ್ತು ತಮ್ಮ ನಡುವಿನ ಆಧ್ಯಾತ್ಮಿಕ ಅನುಭವಗಳನ್ನು ಹಂಚುಕೊಂಡ ಅವರು ಗೌಡರ ನೆನಪಿನಾರ್ಥವಾಗಿ ಕರ್ನಾಟಕದ ನ್ಯಾಯಾಂಗ ವ್ಯವಸ್ಥೆಯಲ್ಲಿ ಚಿರಸ್ಥಾಯಿಯಾಗಿ ಉಳಿಯುವಂತಹ ಯೋಜನೆಯನ್ನು ರೂಪಿಸುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಅವರು ಮಾತನಾಡಿ, ಭಾರತೀಯ ನ್ಯಾಯಾಂಗ ವ್ಯವಸ್ಥೆಗೆ ಅತ್ಯುತ್ತಮ ನ್ಯಾಯಾಧೀಶರನ್ನು ಕೊಡುಗೆ ನೀಡಿದ ಶ್ರೇಯಸ್ಸು ನಮ್ಮ ಕರ್ನಾಟಕ ನ್ಯಾಯಾಂಗ ವ್ಯವಸ್ಥೆಗೆ ಸಲ್ಲುತ್ತದೆ. ದಿವಂಗತ ಮೋಹನ್ ಎಂ. ಶಾಂತನಗೌಡರ್ ಅವರ ಜೊತೆ ಬಾಲ್ಯದಿಂದಲೂ ಒಡನಾಟವಿದ್ದು, ನಮ್ಮ ತಂದೆ ಹಾಗೂ ಅವರ ತಂದೆ ಸ್ನೇಹಿತರಾಗಿದ್ದವರು. ಅತ್ಯಂತ ಸರಳ ಹಾಗೂ ಅತ್ಯುತ್ತಮ ನ್ಯಾಯಾಂಗ ಜ್ಞಾನವನ್ನು ಹೊಂದಿದ್ದ ಮಾನವೀಯ ಗುಣಗಳ ಗೌಡರು ಯುವ ವಕೀಲರುಗಳಿಗೆ ಮಾರ್ಗದರ್ಶಕರಾಗಿದ್ದರು.

ಯಾವಾಗಲೂ ತಮ್ಮನ್ನು ಯುವ ವಕೀಲರು ಹಾಗೂ ನ್ಯಾಯಾಧೀಶರುಗಳೊಂದಿಗೆ ತಮ್ಮನ್ನು ಗುರುತಿಸಿಕೊಳ್ಳಲು ಇಷ್ಟಪಡುತ್ತಿದ್ದ ಅವರು ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿ ನೇಮಕಗೊಂಡ ನಂತರ ಸಹ ಅವರ ವ್ಯಕ್ತಿತ್ವದಲ್ಲಿ ಯಾವುದೇ ಬದಲಾವಣೆಯಾಗಿರಲಿಲ್ಲ ಹಾಗೂ ಅವರೊಬ್ಬ ತನ್ನ ಮಣ್ಣಿಗಂಟಿದ ಬೇರಾಗಿದ್ದರು.

ಅವರ ಹೆಸರನ್ನು ಕರ್ನಾಟಕ ನ್ಯಾಯಾಂಗ ವ್ಯವಸ್ಥೆಯಲ್ಲಿ ನೆನಪಿನಲ್ಲಿರುವಂತೆ ಸರ್ಕಾರದಿಂದ ಯೋಜನೆಯನ್ನು ರೂಪಿಸಲು ಚಿಂತಿಸಲಾಗುವುದು. ಸಾಧಕನಿಗೆ ಸಾವಿಲ್ಲ ಎಂಬ ಸ್ವಾಮಿ ವಿವೇಕಾನಂದರ ಮಾತನ್ನು ಸ್ಮರಿಸುವ ಮೂಲಕ ಗೌಡರಿಗೆ ನಮನ ಸಲ್ಲಿಸಿದರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಮಾಧುಸ್ವಾಮಿ ಅವರು ಮಾತನಾಡಿ, ಮೋಹನ್ ಎಂ. ಶಾಂತನಗೌಡರ್ ಅವರು ಅತ್ಯಂತ ಸಹೃದಯಿ ಮನಸ್ಸನ್ನು ಹೊಂದಿದ್ದರು. ಅವರ ಜೊತೆಗಿನ ತಮ್ಮ ಒಡನಾಟದ ಅನುಭವಗಳನ್ನು ನೆನಪಿಸಿಕೊಂಡರು.

ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರುಗಳಾದ ಶ್ರೀಮತಿ ಬಿ.ವಿ.ನಾಗರತ್ನ, ಅಭಯ್ ಶ್ರೀನಿವಾಸ ಓಕಾ, ಎ.ಎಸ್. ಬೋಪಣ್ಣ, ಎಸ್. ಅಬ್ದುಲ್ ನಜೀರ್, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಹಂಗಾಮಿ ಮುಖ್ಯ ನ್ಯಾಯಮೂರ್ತಿಗಳಾದ ಸತೀಶ್ ಚಂದ್ರ ಶರ್ಮ ಮತ್ತು ಕರ್ನಾಟಕ ರಾಜ್ಯದ ಅಡ್ವೋಕೇಟ್ ಜನರಲ್ ಪ್ರಭುಲಿಂಗ ಕೆ ನಾವಡ್ಗಿ ಸೇರಿದಂತೆ ಕನಾಟಕ ರಾಜ್ಯ ವಕೀಲರ ಪರಿಷತ್ತಿನ ಮುಖಂಡರುಗಳು ನುಡಿನಮನ ಸಲ್ಲಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಎರಡು ನಿಮಿಷಗಳ ಮೌನಾಚರಣೆ ಮೂಲಕ ಮೋಹನ್ ಎಂ. ಶಾಂತನಗೌಡರ್ ಅವರ ಆತ್ಮಕ್ಕೆ ಶಾಂತಿ ಕೋರಲಾಯಿತು. ಇದೇ ಸಂದರ್ಭದಲ್ಲಿ ಗೌಡರ ಕುರಿತು ಪರಿಷತ್ತು ನಿರ್ಮಿಸಿದ್ದ ಕಿರುಚಿತ್ರವನ್ನು ಮುಖ್ಯಮಂತ್ರಿಗಳು ಬಿಡುಗಡೆ ಮಾಡಿದರು.

## ಗಣಿ ಮತ್ತು ಭೂವಿಜ್ಞಾನ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಆಚಾರ ಹಾಲಪ್ಪ ಬಸಪ್ಪ ಅವರು ಸೆಪ್ಟೆಂಬರ್ 19 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರಾದ ಎನ್.ನಾಗರಾಜು (ಎಂ.ಟಿ.ಬಿ) ಅವರು ಸೆಪ್ಟೆಂಬರ್ 19 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಛಾಯಾಚಿತ್ರ ಶೀರ್ಷಿಕೆ:**

Shri Piyush Goyal, Hon'ble Union Minister for Textiles called on Shri Thaawarchand Gehlot, Hon'ble Governor of Karnataka at Raj Bhavan today.

ಕೇಂದ್ರ ಸಚಿವರಾದ ಶ್ರೀ ಪಿಯುಶ್ ಗೋಯಲ್ ಅವರು ಇಂದು ರಾಜಭವನದಲ್ಲಿ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿದರು.

## Sunitha Bags third position at the Para Climbing World Championship 2021

Bengaluru, September 18 (Karnataka Information):

Sunitha Bags third position at the Para Climbing World Championship 2021 in Moscow today . This is the first time India participated in the Visually Impaired Category . Sunitha from Belgaum Karnataka Bagged third position in the B3 category . We anticipated a medal from Manikandan Kumar from Bengaluru but he was placed 4th and Biman Biswas from Indo-Tibetan Border Police was placed 8th even after a great effort in the RP2 category (physically challenged) .

Sujatha from Mandya and Murali from Kolar were placed at 6th and 9th position in B1 category . This is a great beginning and it will only get better from here for India .

## ಅಬಕಾರಿ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಅಬಕಾರಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ಅವರು ಸೆಪ್ಟೆಂಬರ್ 18, 19 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಕನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ತೆರವಾಗಿರುವ ಅಧ್ಯಕ್ಷರ ಸ್ಥಾನಕ್ಕೆ ಚುನಾವಣೆ ಪ್ರಕ್ರಿಯೆ ಕೈಗೊಳ್ಳಲು ಸೆಪ್ಟೆಂಬರ್ 27 ರಂದು ದಿನಾಂಕವನ್ನು ನಿಗಧಿಪಡಿಸಲಾಗಿದೆ.

ದಿನಾಂಕ: 27-09-2021 ರಂದು ಮಧ್ಯಾಹ್ನ 12.00 ಘಂಟೆಗೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಛೇರಿ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು ಇಲ್ಲಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣಾ ಸಭೆಯನ್ನು ಏರ್ಪಡಿಸಲಾಗಿದೆ.

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರನ್ನು ನಾಮಪತ್ರಗಳನ್ನು ಸ್ವೀಕರಿಸಲು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿಗಳು ಅಧಿಕೃತಗೊಳಿಸಿರುತ್ತಾರೆ.

ನಾಮಪತ್ರಗಳನ್ನು ಸ್ವೀಕರಿಸಲು ಸೆಪ್ಟೆಂಬರ್ 27, ಮುಂಜಾನೆ 10.00 ಗಂಟೆಯಿಂದ 11.00 ಗಂಟೆಯವರೆಗೆ ನಿಗಧಿಗೊಳಿಸಿದ್ದು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಛೇರಿ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು ಇಲ್ಲಿ ನಾಮಪತ್ರಗಳನ್ನು ಸಲ್ಲಿಬಹುದಾಗಿದೆ.

ಚುನಾವಣಾ ಸಭೆಯಲ್ಲಿ ಎಲ್ಲಾ ಸದಸ್ಯರ ಹಾಜರಾತಿ ಕಡ್ಡಾಯವಾಗಿದ್ದು, ನಾಮಪತ್ರಗಳ ಪರಿಶೀಲನೆ, ನಾಮಪತ್ರಗಳನ್ನು ವಾಪಸ್ ಪಡೆಯುವುದು, ಚುನಾವಣೆ (ಅಗತ್ಯವಿದ್ದಲ್ಲಿ), ಮತಗಳ ಎಣಿಕೆ (ಅಗತ್ಯವಿದ್ದಲ್ಲಿ), ನಂತರ ಚುನಾವಣಾ ಫಲಿತಾಂಶ ಘೋಷಣೆ ಪ್ರಕ್ರಿಯೆಗಳು ನಡೆಯಲಿವೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ 55ನೇ ಘಟಿಕೋತ್ಸವದ ಪತ್ರಿಕಾಗೋಷ್ಠಿ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದ 55ನೇ ಘಟಿಕೋತ್ಸವ ಕುರಿತು ಪತ್ರಿಕಾಗೋಷ್ಠಿಯನ್ನು ಸೆಪ್ಟೆಂಬರ್ 20, ಸೋಮವಾರದಂದು ಮಧ್ಯಾಹ್ನ 01 ಗಂಟೆಗೆ ಬೆಂಗಳೂರಿನ ಜಿಕೆವಿಕೆಯ ನಾಯಕ್ ಭವನದಲ್ಲಿ ಏರ್ಪಡಿಸಲಾಗಿದೆ.

ಪತ್ರಿಕಾಗೋಷ್ಠಿಯ ಅಧ್ಯಕ್ಷತೆಯನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ.ಎಸ್.ರಾಜೇಂದ್ರ ಪ್ರಸಾದ್ ಅವರು ವಹಿಸಲಿದ್ದಾರೆ. ಕೃಷಿ ವಿಶ್ವವಿದ್ಯಾನಿಲಯದ ಶಿಕ್ಷಣ ನಿರ್ದೇಶಕರು ಡಾ.ಕೆ.ಸಿ.ನಾರಾಯಣಸ್ವಾಮಿ, ಕುಲಸಚಿವರಾದ ಡಾ.ಬಸವೇಗೌಡ, ಹಾಗೂ ವಿಸ್ತರಣಾ ನಿರ್ದೇಶಕರಾದ ಡಾ.ಎನ್.ದೇವಕುಮಾರ್ ಅವರು ಭಾಗವಹಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ವಸತಿ ಸಚಿವರು ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಸೆಪ್ಟೆಂಬರ್ 28, 29 ರಂದು ಧಾರವಾಡ ಮತ್ತು ಬೆಳಗಾವಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಾಣಿಜ್ಯ ಪರೀಕ್ಷೆಗಳ ಫಲಿತಾಂಶ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ (ಇತರೆ ಪರೀಕ್ಷೆಗಳು), ಮಲ್ಲೇಶ್ವರಂ ವತಿಯಿಂದ ನಡೆದ ಏಪ್ರಿಲ್ / ಮೇ–2021ರ ವಾಣಿಜ್ಯ ಪರೀಕ್ಷೆಯ ಫಲಿತಾಂಶವನ್ನು ಸೆಪ್ಟೆಂಬರ್ 18 ರಂದು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ವೆಬ್‌ಸೈಟ್ https://sslc.karnataka.gov.in ನಲ್ಲಿ ಪ್ರಕಟಿಸಲಾಗಿದೆ.

ವಿದ್ಯಾರ್ಥಿಗಳು ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕು. ಹಾಗೂ ಸಂಬಂಧಿಸಿದ ಶಾಲೆಗಳ ಲಾಗಿನ್‌ನಲ್ಲಿ ಈಗಾಗಲೇ ಫಲಿತಾಂಶ ಪಟ್ಟಿಯನ್ನು ಅಪ್‌ಲೋಡ್ ಮಾಡಲಾಗಿದ್ದು, ಸಂಬಂಧಿಸಿದ ವಾಣಿಜ್ಯ ಸಂಸ್ಥೆಯವರು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಆಯಾ ವಾಣಿಜ್ಯ ಸಂಸ್ಥೆಗಳ ಪ್ರಕಟಣಾ ಫಲಕದಲ್ಲಿ ಪ್ರಕಟಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಗದಗದಿಂದ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ವಾಹನ ಸೌಲಭ್ಯ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಶಾಲಾ ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗವು ಬೆಳ್ಳಟ್ಟಿ ಗ್ರಾಮದಿಂದ ಕುಕ್ಕರಗುಂದಿ ಗ್ರಾಮಕ್ಕೆ ಪ್ರತಿ ದಿನ ಬಸ್ಸುಗಳನ್ನು ಪ್ರಾರಂಭಿಸಿರುತ್ತದೆ. ಬೆಳ್ಳಟ್ಟಿ ಗ್ರಾಮದಿಂದ ಬೆಳಗ್ಗೆ 08.30 ಗಂಟೆಗೆ ಹಾಗೂ ಸಾಯಂಕಾಲ 05.00 ಗಂಟೆಗೆ ಮತ್ತು ಮುಂಡರಗಿಯಿಂದ ತಾಮ್ರಗುಂಡಿ ಗ್ರಾಮಕ್ಕೆ ಬೆಳಿಗ್ಗೆ 09.00 ಗಂಟೆಗೆ ಹಾಗೂ ಸಾಯಂಕಾಲ 04.30 ಗಂಟೆಗೆ ಬಸ್ಸುಗಳು ಕಾರ್ಯಾಚರಣೆ ನಡೆಸುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಎನ್.ಎಸ್.ಎಸ್. ಘಟಕಕ್ಕೆ ಸಂಯೋಜನಾಧಿಕಾರಿ ನಿಯೋಜನೆಗೆ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

ಬೆಂಗಳೂರು ವಿಶ್ವವಿದ್ಯಾಲಯದ ಎನ್.ಎಸ್.ಎಸ್. ಘಟಕಕ್ಕೆ ಪೂರ್ಣಕಾಲಿಕ 'ಎನ್.ಎಸ್.ಎಸ್. ಕಾರ್ಯಕ್ರಮ ಸಂಯೋಜನಾಧಿಕಾರಿ'ಯವರನ್ನು ನಿಯೋಜನೆ ಮೇಲೆ ಮೂರು ವರ್ಷದ ಅವಧಿಗೆ ನೇಮಕ ಮಾಡಲು ಬೆಂಗಳೂರು ವಿಶ್ವವಿದ್ಯಾಲಯ ಹಾಗೂ ಅದರ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅಧ್ಯಾಪಕರುಗಳು ಅರ್ಜಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್ www.bangaloreuniversity.ac.in ಮುಖಪಟವನ್ನು ವೀಕ್ಷಿಸಿ, ಡೌನ್‌ಲೊಡ್ ಮಾಡಿಕೊಂಡು, ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರ/ಕಾಲೇಜಿನ ಪ್ರಾಂಶುಪಾಲರ ಮುಖಾಂತರ ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ, ಬೆಂಗಳೂರು–560056, ಇವರಿಗೆ ದಿನಾಂಕ **18.10.2021** ರೊಳಗೆ ಸಲ್ಲಿಸತಕ್ಕದ್ದು. ನೇಮಕಾತಿ ಅಧಿಸೂಚನೆ, ನಿಗದಿತ ಅರ್ಜಿ ನಮೂನೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್‌ನ ಮುಖಪುಟವನ್ನು ವೀಕ್ಷಿಸಿ ಪಡೆದುಕೊಳ್ಳಬಹುದು.

**Applications are invited appointment of N.S.S. Programme Co-ordinator**

Bengaluru, September 18, (Karnataka Information):

Applications are invited from the eligible teachers of Bangalore University and its affiliated colleges for appointment of Full-time 'N.S.S. Programme Co-ordinator' in Bangalore University on Deputation basis for a period of three years. Interested teachers may send their applications in the prescribed proforma, which is available in the Bangalore University website i.e., www.bangaloreuniversity.ac.in. The filled-in application form along with relevant copies of the certificates should be submitted to the University on or before **18.10.2021** through the concerned Chairperson/Principal to the Registrar, Bangalore University, Jnana Bharathi, Bengaluru-560056. The candidates may visit the official website of the Bangalore University regarding notification, application format etc.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ಸೆಪ್ಟೆಂಬರ್ 18 (ಕರ್ನಾಟಕ ವಾರ್ತೆ):

**ದಿನಾಂಕ: 18.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 68 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 52 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 72 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 63 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 99 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 61 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 57 | ತೃಪ್ತಿಕರ | $PM_{10}$ |

| (18.9.2021 at 10.05 AM) | | | | |
|---|---|---|---|---|
| 8 | BWSSB,ಕಾಡಬೀಸನಹಳ್ಳಿ | 73 | ತೃಪ್ತಿಕರ | $PM_{10}$ |
| 9 | ಪೀಣ್ಯ | 67 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | 98 | ತೃಪ್ತಿಕರ | $PM_{2.5}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 18.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 68 | Satisfactory | $PM_{10}$ |
| 2 | Jayanagar 5th Block, Shalini ground | 52 | Satisfactory | $PM_{10}$ |
| 3 | KAVIKA, Mysore Road | 72 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 63 | Satisfactory | $PM_{10}$ |
| 5 | HSR Layout, near Central Silkboard | 99 | Satisfactory | $PM_{10}$ |
| 6 | City Railway Station, Magestic, Bengaluru | 61 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 57 | Satisfactory | $PM_{10}$ |

| (18.9.2021 at 10.05 AM) | | | | |
|---|---|---|---|---|
| 8 | BWSSB, Kadabesanahalli | 73 | Satisfactory | $PM_{10}$ |
| 9 | Peenya | 67 | Satisfactory | $PM_{10}$ |
| 10 | BTM Layout | 98 | Satisfactory | $PM_{2.5}$ |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |